# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 1011

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿದಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 17.03.2025

ಉತ್ತರಿಸುವ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಶಾಲಾ ಆಡಳಿತ ಮಂಡಳಿಗಳು, ವಿದ್ಯಾರ್ಥಿಗಳ ಮಾಹಿತಿಯನ್ನು ಸ್ಯಾಟ್ಸ್‌ನಲ್ಲಿ ಆದಾರ್ ಅಪ್‌ಡೇಟ್ ಹಾಗೂ ಎಸ್.ಎಸ್.ಪಿ. ಪೋರ್ಟಲ್‌ನಲ್ಲಿ ವಿದ್ಯಾರ್ಥಿಗಳ ಇ-ಕೆವೈಸಿಯಲ್ಲಿ ಬಯೋಮೆಟ್ರಿಕ್ ಪೂರ್ಣಗೊಳಿಸದ ಪರಿಣಾಮ ಲಕ್ಷಾಂತರ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | SATS ತಂತ್ರಾಂಶದಲ್ಲಿ (ಶಾಲಾ ದಾಖಲಾತಿಯಂತೆ) ವಿದ್ಯಾರ್ಥಿಗಳ ಹೆಸರು ಹಾಗೂ ವಿದ್ಯಾರ್ಥಿಗಳ ಆಧಾರ್ ನಲ್ಲಿರುವ ಹೆಸರು ತಾಳೆಯಾಗಬೇಕಿರುವ ಉದ್ದೇಶಕ್ಕಾಗಿ SATS ತಂತ್ರಾಂಶದಲ್ಲಿ ಆಧಾರ್ ಮೌಲ್ಯೀಕರಣ (Aadhaar Demographic Authentication) ಸೌಲಭ್ಯವನ್ನು ಶಾಲಾ ಹಂತದಲ್ಲಿ ನೀಡಲಾಗಿರುತ್ತದೆ. SATS ತಂತ್ರಾಂಶದಲ್ಲಿನ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣಕ್ಕು ಎಸ್.ಎಸ್.ಪಿ. ಪೋರ್ಟಲ್‌ನಲ್ಲಿ ವಿದ್ಯಾರ್ಥಿಯು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಯಾವುದೇ ಅವಲಂಬನೆಯಿರುವುದಿಲ್ಲ.<br><br>ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ ವಿವಿಧ ಯೋಜನೆಯಡಿ ಅರ್ಹ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ SSP(State Scholarship Portal) ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಬೇಕಿದ್ದು, ಆಧಾರ್ ಮೌಲೀಕರಣವನ್ನು ಸದರಿ ತಂತ್ರಾಂಶದಲ್ಲಿ ಪ್ರತ್ಯೇಕವಾಗಿ ಮಾಡಲಾಗುತ್ತಿರುವ ಮಾಹಿತಿಯನ್ನು ತಿಳಿಸಿದೆ.<br><br>SATS ತಂತ್ರಾಂಶದಲ್ಲಿ ಶಾಲೆಯಲ್ಲಿ ದಾಖಲಾಗಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ನಿರ್ವಹಿಸುತ್ತಿದ್ದು, ಈ ಮಾಹಿತಿಯನ್ನು ನೇರವಾಗಿ API ಮೂಲಕ SSP ಗೆ ನೀಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಪರಿಶಿಷ್ಟ ಜಾತಿ/ಪಂಗಡ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸೇರಿ ವಿವಿಧ ವರ್ಗಗಳ ವಿದ್ಯಾರ್ಥಿಗಳು ಸರ್ಕಾರದಿಂದ ದೊರೆಯುವ ಹಲವು ರೀತಿಯ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಶಿಕ್ಷಣ ಇಲಾಖೆಯ ವಿದ್ಯಾರ್ಥಿ ಸಾಧನೆಯ ಟ್ರ್ಯಾಕಿಂಗ್ ಸಿಸ್ಟಂ (ಸ್ಯಾಟ್ಸ್)ನಲ್ಲಿ ಆಧಾರ್ ಜೋಡಣೆ ಮಾಡಬೇಕಾಗಿದ್ದು, ಶಾಲಾ ಆಡಳಿತ ಮಂಡಳಿಗಳು ಸ್ಯಾಟ್ಸ್ ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣವನ್ನು ಪೂರ್ಣಗೊಳಿಸಿಲ್ಲದ ಕಾರಣದಿಂದಾಗಿ ಹಲವಾರು ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ | ವಿದ್ಯಾರ್ಥಿಯ ಹೆಸರು SATS ತಂತ್ರಾಂಶದಲ್ಲಿ (ಶಾಲಾ ದಾಖಲಾತಿಯಂತೆ) ಹಾಗೂ ಆಧಾರ್ ನಲ್ಲಿ ವ್ಯತ್ಯಾಸವಿರುವುದರಿಂದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸಮಸ್ಯೆವುಂಟಾಗಿದ್ದರೆ, ಪೋಷಕರ ನಿರ್ಧಾರದ ಮೇರೆಗೆ ಅಗತ್ಯ ದಾಖಲೆಯಲ್ಲಿ ತಿದ್ದುಪಡಿ ಮಾಡಿಸಿಕೊಂಡು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಕುರಿತು ಇಲಾಖೆಯಿಂದ ಸ್ಪಷ್ಟ ಮಾರ್ಗದರ್ಶನವನ್ನು ನೀಡಲಾಗಿದ್ದು ಪ್ರತಿಯನ್ನುಅನುಬಂಧದಲ್ಲಿ ಒದಗಿಸಿದೆ.<br><br>ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿಯಿಂದ ನಿರಂತರವಾಗಿ ಜಿಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಭೆಯನ್ನು ಆಯೋಜಿಸಿ ವಿದ್ಯಾರ್ಥಿವೇತನದ ಪ್ರಗತಿಯನ್ನು ಹಾಗೂ |

| | | |
|---|---|---|
| | ಅರ್ಜಿ ಸಲ್ಲಿಸಲು ಸಾಧ್ಯವಾಗದೆ ಬಾಕಿ ಇದ್ದು, ಈ ಸಮಸ್ಯೆ ಪರಿಹರಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು: | ತಂತ್ರಾಂಶದಲ್ಲಿ ಆಧಾರ್ ಮೌಲ್ಯೀಕರಣ ಪ್ರಗತಿಯನ್ನು ಅನುಪಾಲನೆ ಮಾಡಲಾಗುತ್ತಿದೆ.<br><br>UIDAI, EDCS ರವರ ಸಹಯೋಗದೊಂದಿಗೆ ಆಧಾರ್ ಇಲ್ಲದ ವಿದ್ಯಾರ್ಥಿಗಳಿಗೆ ಆಧಾರ್ ಸೃಜಿಸಲು ಹಾಗೂ ಆಧಾರ್‌ನಲ್ಲಿ ವಿದ್ಯಾರ್ಥಿಗಳ ಹೆಸರು ತಿದ್ದುಪಡಿ ಅವಶ್ಯವಿದ್ದಲ್ಲಿ ಶಾಲೆಗಳಲ್ಲಿ ಆಧಾರ್ ಶಿಬಿರ ಹಮ್ಮಿಕೊಳಲು ಕ್ಷೇತ್ರ ಹಂತದ ಅಧಿಕಾರಿಗಳಿಗೆ ತಿಳಿಸಲಾಗಿದೆ. ಪ್ರಸ್ತುತ ಹಲವು ಜಿಲ್ಲೆಗಳಲ್ಲಿ ಈಗಾಗಲೇ ಆಧಾರ್ ಶಿಭಿರ ಹಮ್ಮಿಕೊಂಡಿದ್ದು, ಕಾರ್ಯವು ಪ್ರಗತಿಯಲ್ಲಿದೆ. |
| ಇ) | ಯಾವ ಕಾಲಮಿತಿಯೊಳಗೆ ಈ ಸಮಸ್ಯೆ ಪರಿಹರಿಸಿ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ತಮ್ಮ ವಿದ್ಯಾರ್ಥಿವೇತನ ಸಿಗುವಂತೆ ಮಾಡಲಾಗುವುದು? | ಮೇಲ್ಕಂಡಂತೆ ತಿಳಿಸಿರುವ ಸಮಸ್ಯೆಗಳಿಂದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗದ ವಿದ್ಯಾರ್ಥಿಗಳನ್ನು ಗುರುತಿಸಿ ಶಾಲೆಯ ಮುಖ್ಯ ಶಿಕ್ಷಕರು ಪೋಷಕರಿಗೆ ಈ ಮೇಲೆ ವಿವರಿಸಿದಂತೆ ಅಗತ್ಯ ದಾಖಲೆಯಲ್ಲಿ ತಿದ್ದುಪಡಿಗೊಳಪಡಿಸಿ ಅರ್ಜಿ ಸಲ್ಲಿಸುವ ಕಾರ್ಯವನ್ನು ನಿರಂತರವಾಗಿ ಮಾಡಲಾಗುತ್ತಿದೆ.<br><br>ಪೋಷಕರ ಆದಾಯ ಪ್ರಮಾಣ ಪತ್ರ/ಜಾತಿ ಪ್ರಮಾಣ ಪತ್ರ ಇಲ್ಲದಿರುವುದರಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗದ ವಿದ್ಯಾರ್ಥಿಗಳ ಪೋಷಕರಿಗೂ ಶಾಲೆಯ ಮುಖ್ಯ ಶಿಕ್ಷಕರು ಅಗತ್ಯ ಮಾರ್ಗದರ್ಶನ ನೀಡಿ ದಾಖಲೆಯನ್ನು ಪಡೆದು ಅರ್ಜಿ ಸಲ್ಲಿಸುವ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: EP 34 EGOV 2025**

**( ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಅನುಬಂಧ

# ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗರಸ್ತೆ, ಬೆಂಗಳೂರು-560001**

ಸಂಖ್ಯೆ: DPI-CPI0SATS(SCHOLARSHIP)/1/2025-SATS ದಿನಾಂಕ : 21.01.2025

**ಅತೀ ತುರ್ತು**

::ಜ್ಞಾಪನ::

ವಿಷಯ : SATS ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣ ಸಂಬಂಧಿಸಿದ ಕಾರ್ಯಗಳನ್ನು ತುರ್ತಾಗಿ ಪೂರ್ಣಗೊಳಿಸುವ ಕುರಿತು

ಉಲ್ಲೇಖ :

1. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ) ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆ ದಿನಾಂಕ: 09.01.2025.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ:SWD-SCHC0SC/146/2024/1498927, ದಿನಾಂಕ:30.12.2024.
3. ಮಾನ್ಯ ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ಇ-ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:09.01.2024 ರಂದು ನಡೆದ ಸಭೆ
4. ಈ ಕಛೇರಿ ಸುತ್ತೋಲೆ ಸಂಖ್ಯೆ: DPI-CPI0SATS(SS-)/2/2022-SATS, ದಿನಾಂಕ:15.07.2024.
5. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 100 ಡಿಟಿಬಿ 2014, ಬೆಂಗಳೂರು, ದಿನಾಂಕ:26.10.2015

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ ಸುಮಾರು 2 ವರ್ಷಗಳಿಂದ SATS ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣವನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಇದುವರೆಗೂ ರಾಜ್ಯದಲ್ಲಿ ಒಟ್ಟಾರೆ 1.04 ಕೋಟಿ ವಿದ್ಯಾರ್ಥಿಗಳಲ್ಲಿ 78 ಲಕ್ಷ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕಣ ಮಾತ್ರ ಯಶಸ್ವಿಯಾಗಿ ಪೂರ್ಣಗೊಂಡಿರುತ್ತದೆ, 18 ಲಕ್ಷ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣ ಇದುವರೆಗೂ ತಂತ್ರಾಂಶದಲ್ಲಿ ಮೌಲ್ಯೀಕರಿಸಲಾಗಿರುವುದಿಲ್ಲ. ಹಾಗೂ ಸುಮಾರು 8 ಲಕ್ಷ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಿಸಲಾಗಿದ್ದರು ಆಧಾರ್ ಮತ್ತು SATS ನಲ್ಲಿ ವಿದ್ಯಾರ್ಥಿಯ ಹೆಸರು ತಾಳೆಯಾಗದ ಕಾರಣ ಮೌಲ್ಯೀಕರಣ ವಿಫಲವೆಂದು ಪರಿಗಣಿಸಲಾಗಿದೆ. ಈ ಅಂತರವನ್ನು ಪೂರ್ಣಗೊಳಿಸಲು ಉಲ್ಲೇಖ-4 ರ ಈ ಕಚೇರಿಯ ಸುತ್ತೋಲೆಯಲ್ಲಿ ಶಾಲೆಗಳಲ್ಲಿ ವಿಶಿಷ್ಟ ಆಧಾರ್ ಶಿಬಿರಗಳನ್ನು ಹಮ್ಮಿಕೊಳ್ಳಲು ತಿಳಿಸಲಾಗಿರುತ್ತದೆ.

ಇದುವರೆಗೂ ಒಟ್ಟಾರೆ 26 ಲಕ್ಷ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಣ ತಂತ್ರಾಂಶದಲ್ಲಿ ಬಾಕಿಯಿರುವುದರಿಂದ, ವಿವಿಧ ಇಲಾಖೆಯ ವಿದ್ಯಾರ್ಥಿವೇತನ ಮತ್ತು ಇತರೆ ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯುಂಟಾಗುತ್ತಿದೆ. ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸದೆ ವಿಳಂಬವಾಗಿರುವುದು ಇಲಾಖೆಗೆ ವಿವಿಧ ಸಂದರ್ಭಗಳಲ್ಲಿ ಮುಜುಗರ ಉಂಟಾಗಿರುತ್ತದೆ. ಆದ್ದರಿಂದ ಇದಕ್ಕೆ ಕಾರಣವಾದವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಪರಿಗಣಿಸಲಾಗಿದೆ. ಕೊನೆಯ ಅವಕಾಶವಾಗಿ ಇಂದಿನಿಂದ ಮುಂದಿನ 7 ದಿನಗಳವರೆಗೆ ಅವಕಾಶ ನೀಡಿ ಈ ಕೆಳಗಿನಂತೆ ತುರ್ತಾಗಿ ಕ್ರಮವಹಿಸಲು ಆದೇಶಿಸಿದೆ.

ಕೈಗೊಳ್ಳಬೇಕಾದ ಕ್ರಮಗಳು :

1. ಜಿಲ್ಲೆ ಹಾಗೂ ತಾಲ್ಲೂಕು ಹಂತದಲ್ಲಿ SATS ತಂತ್ರಾಂಶದ ಅನುಸಾರ ದಾಖಲಾಗಿರುವ ಒಟ್ಟು ಮಕ್ಕಳಲ್ಲಿ ಆಧಾರ್ ಮೌಲ್ಯೀಕರಣವಾಗಿರುವ ಮಾಹಿತಿಯನ್ನು ಪರಿಶೀಲಿಸುವುದು.

Scanned with OKEN Scanner

2. ಇದುವರೆಗೂ ಆಧಾರ್ ಮೌಲ್ಯೀಕರಣ ಆಗದಿರುವ ವಿದ್ಯಾರ್ಥಿಗಳ ಶಾಲಾವಾರು, ವಿದ್ಯಾರ್ಥಿವಾರು ಪರಿಶೀಲಿಸುವುದು.
3. ಪರಿಶೀಲಿಸಿದ ವಿದ್ಯಾರ್ಥಿಗಳಿಗೆ ಆಧಾರ್ ಇದ್ದು SATS ತಂತ್ರಾಂಶದಲ್ಲಿ ಮೌಲ್ಯೀಕರಣ ಆಗದೇ ಇದ್ದಲ್ಲಿ, ವಿದ್ಯಾರ್ಥಿಯ ಆಧಾರ್ ಮಾಹಿತಿಯನ್ನು ಪೋಷಕರಿಂದ ಪಡೆದು ತುರ್ತಾಗಿ SATS ತಂತ್ರಾಂಶದಲ್ಲಿ ಮೌಲ್ಯೀಕರಣ ಮಾಡುವುದು.
4. ನಂತರ ಆಧಾರ್ ಮೌಲ್ಯೀಕರಣ ಬಾಕಿಯಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಜಿಲ್ಲಾವಾರು, ತಾಲ್ಲೂಕವಾರು, ಶಾಲಾವಾರು ಪಟ್ಟಿ ಮಾಡುವುದು, ಪಟ್ಟಿ ಮಾಡಲಾದ ಮಾಹಿತಿಯನ್ನು EDCS ಸಂಸ್ಥೆಯಿಂದ ರಚಿಸಲಾಗುವ ತಂಡಕ್ಕೆ ಸಲ್ಲಿಸಿ ಸದರಿ ರವರೊಂದಿಗೆ ಸಮನ್ವಿಯಿಸಿ ಅತೀ ಹೆಚ್ಚು ಬಾಕಿಯಿರುವ ಶಾಲೆಗಳಲ್ಲಿ ವಿಶೇಷ ಆಧಾರ್ ಶಿಬಿರ ಹಮ್ಮಿಕೊಳ್ಳುವುದು. (ಸದರಿ ಕಾರ್ಯಕ್ಕೆ ಒಬ್ಬ ಇಲಾಖೆಯ ನೋಡಲ್ ಅಧಿಕಾರಿಯನ್ನು ಜಿಲ್ಲೆ ಹಾಗೂ ತಾಲ್ಲೂಕು ಹಂತದಲ್ಲಿ ಸಮನ್ವಯಿಸಲು ರಚಿಸುವುದು)
5. ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಆಧಾರ್ ಮೌಲ್ಯೀಕರಿಸಿಯೂ ಆಧಾರ್ ಮತ್ತು SATS ನಲ್ಲಿ ಹೆಸರು ತಾಳೆಯಾಗದೆ ಮೌಲ್ಯೀಕರಣ ವಿಫಲವಾದ ಪ್ರಕರಣಗಳಲ್ಲಿ ಈ ಕೆಳಕಂಡಂತೆ ಕ್ರಮವಹಿಸುವುದು.

**1. ಆಧಾರ್‌ನಲ್ಲಿರುವಂತೆ ವಿದ್ಯಾರ್ಥಿಯ ಹೆಸರನ್ನು SATS ತಂತ್ರಾಂಶದಲ್ಲಿ ತಿದ್ದುಪಡಿ ಮಾಡಬೇಕಾದ ಕುರಿತು.**

ಇಂತಹ ಪ್ರಕರಣಗಳಲ್ಲಿ ಆಧಾರ್‌ನಲ್ಲಿರುವಂತೆ SATS ತಂತ್ರಾಂಶದಲ್ಲಿ ವಿದ್ಯಾರ್ಥಿಯ ಹೆಸರು ಇಂಧೀಕರಣ ಮಾಡುವ ಕುರಿತು ಪೋಷಕರಿಂದ ಒಪ್ಪಿಗೆಯನ್ನು (ಸ್ವಯಂ ಘೋಷಿತ ದೃಢೀಕರಣ) ಪಡೆದು ಆಧಾರ್‌ನಲ್ಲಿರುವಂತೆ ವಿದ್ಯಾರ್ಥಿಯ ಹೆಸರನ್ನು SATS ತಂತ್ರಾಂಶದಲ್ಲಿ ಶಾಲಾ ಮುಖ್ಯ ಶಿಕ್ಷಕರು ಇಂದೀಕರಿಸುವುದು. (ನಮೂನೆಯನ್ನು ಲಗತ್ತಿಸಿದೆ). ನಂತರ ಉಲ್ಲೇಖ-5 ರ ಸರ್ಕಾರದ ಸುತ್ತೋಲೆಯಂತೆ ಸಂಬಂಧಿಸಿದ ಶಾಲಾ ದಾಖಲಾತಿಯಲ್ಲಿ ತಿದ್ದುಪಡಿ ಮಾಡಿಕೊಳ್ಳುವುದು.

ತಿದ್ದುಪಡಿಯಾದ ನಂತರ ತಪ್ಪದೇ SATS ತಂತ್ರಾಂಶದಲ್ಲಿ ಮತ್ತು ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಲಾಗಿನ್‌ನಲ್ಲಿ ವಿದ್ಯಾರ್ಥಿಯ ಆಧಾರ್ ಮೌಲ್ಯೀಕರಣವನ್ನು ಪೂರ್ಣಗೊಳಿಸುವುದು

**2. ಶಾಲೆಯ ದಾಖಲೆಗಳಲ್ಲಿ ಮತ್ತು SATS ನಲ್ಲಿ ವಿದ್ಯಾರ್ಥಿಯ ಹೆಸರು ಸರಿಯಿದ್ದು ಆಧಾರ್‌ನಲ್ಲಿ ತಿದ್ದುಪಡಿ ಮಾಡಬೇಕಾದ ಕುರಿತು.**

ಇಂತಹ ಪ್ರಕರಣಗಳಲ್ಲಿ UIDAI/ಆಧಾರ್ ಸ್ವೀಕಾರಾರ್ಹ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಆಧಾರ್ ನಲ್ಲಿ ವಿದ್ಯಾರ್ಥಿಯ ಹೆಸರನ್ನು ತಿದ್ದುಪಡಿ ಮಾಡಿಸಿಕೊಳ್ಳುವುದು.

**3. ವಿದ್ಯಾರ್ಥಿವೇತನ ಬಗ್ಗೆ SSP ತಂತ್ರಾಶದಲ್ಲಿ ಕೈಗೊಳ್ಳಬೇಕಾದ ಕ್ರಮದ ಬಗ್ಗೆ :**

1. Designation of Institute Nodal Officers (INO) ಪ್ರತಿ ಶಾಲೆಗೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿ SSP Portal Login ನ Access ನೀಡಲಾಗಿರುತ್ತದೆ
2. INO ಲಾಗಿನ್ ಸೃಜನೆಗೆ ಸಂಬಂಧಿಸಿದಂತೆ ಹಾಗೂ eKYC, Biometric ಪೂರ್ಣಗೊಳಿಸುವ ಪ್ರಕ್ರಿಯೆ ಬಗ್ಗೆ ಶಾಲಾ ಮುಖ್ಯ ಶಿಕ್ಷಕರು ತಾಲ್ಲೂಕು ಹಂತದ ಸಮಾಜ ಕಲ್ಯಾಣ ಇಲಾಖೆಯ ಕಛೇರಿಯನ್ನು ಸಂಪರ್ಕಿಸುವುದು.
3. INO ಲಾಗಿನ್‌ನಲ್ಲಿ SATS ದತ್ತಾಂಶದನ್ವಯ ಆಯಾ ಶಾಲೆಯಲ್ಲಿ ದಾಖಲಾದ ಎಲ್ಲಾ ವಿದ್ಯಾರ್ಥಿಗಳ ಪಟ್ಟಿಯನ್ನು ಒದಗಿಸಲಾಗಿರುತ್ತದೆ. ಈ ಪಟ್ಟಿಯಲ್ಲಿ ವಿದ್ಯಾರ್ಥಿಯ ಹೆಸರು, SSP ID (ವಿದ್ಯಾರ್ಥಿಯು ಈಗಾಗಲೇ SSP ಯಲ್ಲಿ ಖಾತೆಯನ್ನು ಸೃಜಿಸಿದ್ದಲ್ಲಿ), Application Submitted (Yes/No) (ಪ್ರಸಕ್ತ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಕೆಯಾಗಿದ್ದಲ್ಲಿ), Aadhar Seeding Status ಮುಂತಾದ ವಿವರಗಳನ್ನು ಒದಗಿಸಲಾಗಿರುತ್ತದೆ.

Scanned with OKEN Scanner

INO ಲಾಗಿನ್‌ನಲ್ಲಿ ಕೈಗೊಳ್ಳಬೇಕಾದ ಕ್ರಮ :

1. INO ಲಾಗಿನ್‌ನಲ್ಲಿ SATS ದತ್ತಾಂಶದನ್ವಯ ಆಯಾ ಶಾಲೆಯಲ್ಲಿ ದಾಖಲಾದ ಎಲ್ಲಾ ವಿದ್ಯಾರ್ಥಿಗಳ ಪಟ್ಟಿಯನ್ನು ಒದಗಿಸಲಾಗಿರುತ್ತದೆ. ಈ ಪಟ್ಟಿಯಲ್ಲಿ ವಿದ್ಯಾರ್ಥಿಯ ಹೆಸರು, SSP ID (ವಿದ್ಯಾರ್ಥಿಯು ಈಗಾಗಲೇ SSP ಯಲ್ಲಿ ಖಾತೆಯನ್ನು ಸೃಜಿಸಿದ್ದಲ್ಲಿ), Application Submitted (Yes/No) (ಪ್ರಸಕ್ತ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಕೆಯಾಗಿದ್ದಲ್ಲಿ), Aadhar Seeding Status ಮುಂತಾದ ವಿವರಗಳನ್ನು ಒದಗಿಸಲಾಗಿರುತ್ತದೆ.

2. INO ಲಾಗಿನ್ ನಲ್ಲಿ ಒದಗಿಸಲಾದ ಪಟ್ಟಿಯಲ್ಲಿ ಯಾವುದಾದರೂ ವಿದ್ಯಾರ್ಥಿಯ ಹೆಸರು ಬಿತ್ತರವಾಗದೇ ಇದ್ದಲ್ಲಿ ಸದರಿ ಸಮಸ್ಯೆಯನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಗಮನಕ್ಕೆ ತಂದು SATS ನಲ್ಲಿ ನಮೂದು ಮಾಡಲು ಹಾಗೂ SSP Portal ನಲ್ಲಿ ಅಳವಡಿಸಲು ಕ್ರಮವಹಿಸುವುದು. ಈ ಪ್ರಕ್ರಿಯೆಗೆ ಸಂಬಂಧಪಟ್ಟ ಶಾಲೆಯ Institute Nodal Officer (INO) ಅಧಿಕಾರಿಯು ಖುದ್ದು ನಿರ್ವಹಿಸಬೇಕಾಗಿರುತ್ತದೆ.

3. INO ಲಾಗಿನ್ ನಲ್ಲಿ ಒದಗಿಸಲಾದ ಪಟ್ಟಿಯಲ್ಲಿ ವಿದ್ಯಾರ್ಥಿಯು ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸದೇ ಇದ್ದಲ್ಲಿ ಸದರಿ ವಿದ್ಯಾರ್ಥಿಯ ವಿದ್ಯಾರ್ಥಿವೇತನ ಅರ್ಜಿಯನ್ನು ಸಲ್ಲಿಸಲು ವಿದ್ಯಾರ್ಥಿಗೆ ಅಥವಾ ವಿದ್ಯಾರ್ಥಿಯ ಪೋಷಕರಿಗೆ ತಿಳಿಸುವುದು. ಸಾಧ್ಯವಾದಲ್ಲಿ ವಿದ್ಯಾರ್ಥಿಯ ಒಮ್ಮತಿಮೇರೆಗೆ ಅಗತ್ಯ ಮಾಹಿತಿಯನ್ನು ಪಡೆದು ತಮ್ಮ ಲಾಗಿನ್ ಮೂಲಕವು ಅರ್ಜಿ ಸಲ್ಲಿಸಲು ಅವಕಾಶವಿದ್ದು. ಅರ್ಜಿ ಸಲ್ಲಿಸಲು ಕ್ರಮವಹಿಸುವುದು.

4. INO ಲಾಗಿನ್ ನಲ್ಲಿ ಒದಗಿಸಲಾದ ಪಟ್ಟಿಯಲ್ಲಿ Aadhar Seeding Status ಅನ್ನು ಒದಗಿಸಲಾಗಿರುತ್ತದೆ. ವಿದ್ಯಾರ್ಥಿಯ ಆಧಾರ್ ಜೋಡಣೆಯಾಗದೇ ಇದ್ದಲ್ಲಿ ಸಂಬಂಧಪಟ್ಟ ಬ್ಯಾಂಕ್‌ನಲ್ಲಿ ಆಧಾರ್ ಜೋಡಣೆ ಮಾಡಿಸುವ ಸಂಬಂಧ ವಿದ್ಯಾರ್ಥಿಯ ಪೋಷಕರಿಗೆ ಸೂಕ್ತ ಮಾರ್ಗದರ್ಶನ ನೀಡಲು ಹಾಗೂ ಹತ್ತಿರದ ಅಂಚೆ ಕಛೇರಿ ಅಧಿಕಾರಿಯನ್ನು ಸಂಪರ್ಕಿಸಿ ಆಧಾರ್ ಜೋಡಣೆ ಸಲುವಾಗಿ IPPB ಖಾತೆಯನ್ನು ತೆರೆಯುವಂತೆ ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವಂತೆ ಎಲ್ಲಾ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಚಿಸುವುದು.

ಉಲ್ಲೇಖ-3 ರ ಸಭೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯಡಿ ವಿದ್ಯಾರ್ಥಿಗಳಿಗೆ ನೀಡಲಾಗುವ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ, ಇದುವರೆಗೂ 2.6 ಲಕ್ಷ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸದೆ ಬಾಕಿಯಿರುವ ಕುರಿತು ಪ್ರಸ್ತಾಪಿಸಲಾಗಿರುತ್ತದೆ, ಈ ಪಟ್ಟಿಯು Institute Nodal Officers (INO) ಗಳ SSP Portal Login ನಲ್ಲಿ ಲಭ್ಯವಿರುತ್ತದೆ. ಆದ್ದರಿಂದ ರಾಜ್ಯದ ಎಲ್ಲಾ ಶಾಲೆಯ Institute Nodal Officers (INO) / ಮುಖ್ಯ ಶಿಕ್ಷಕರಿಗೆ ತಮ್ಮಲಾಗಿನ್ ಅನ್ನು ಪರಿಶೀಲಿಸಿ ವಿದ್ಯಾರ್ಥಿಗಳಿಗೆ ಹಾಗೂ ವಿದ್ಯಾರ್ಥಿಯ ಪೋಷಕರಿಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸೂಕ್ತ ಮಾರ್ಗದರ್ಶನ ನೀಡಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿ, ಮುಂದಿನ 7 ದಿನಗಳಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ.

ಆಯುಕ್ತರು
(ಶಾಲಾ ಶಿಕ್ಷಣ ಇಲಾಖೆ)

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ರವರಿಗೆ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರ ಮೂಲಕ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಶಾಲೆಯ ಮುಖ್ಯ ಶಿಕ್ಷಕರಿಗೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಅಗತ್ಯ ಕ್ರಮಕ್ಕಾಗಿ
4. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ
5. ಕಛೇರಿ ಪ್ರತಿ

Scanned with OKEN Scanner

**ವಿದ್ಯಾರ್ಥಿಯ ಹೆಸರನ್ನು ಆಧಾರ್‌ನಲ್ಲಿರುವಂತೆ ಶಾಲೆಯ SATS ತಂತ್ರಾಂಶದಲ್ಲಿ ಬದಲಾವಣೆ ಮಾಡಲು ಕೋರಿ**

ನಮೂನೆ

ಕುಮಾರ/ಕುಮಾರಿ.________, ನೇ_ತರಗತಿಯಲ್ಲಿ ವ್ಯಾಸಂಗಮಾಡುತ್ತಿರುವ ವಿದ್ಯಾರ್ಥಿಯ ತಂದೆ/ತಾಯಿ/ಪೋಷಕರಾದ ಶ್ರೀ/ಶ್ರೀಮತಿ.________ ಆದ ನಾನು ನನ್ನ ಮಗುವಿನ ಹೆಸರನ್ನು ಆಧಾರ್‌ನಲ್ಲಿರುವಂತೆ ಶಾಲೆಯ SATS ತಂತ್ರಾಂಶದಲ್ಲಿ ಇಂದೀಕರಿಸಲು ಒಪ್ಪಿದೆ

ತಂದೆ/ತಾಯಿ/ಪೋಷಕರ ಸಹಿ

ದಿನಾಂಕ:

ಸ್ಥಳ :

Scanned with OKEN Scanner